ತುರ್ತು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:34:ಆರ್‌ಆರ್‌ಸಿ:2014.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-4-2015.

ಸುತ್ತೋಲೆ

ವಿಷಯ: 2014-15ನೇ ಸಾಲಿನ ಆರ್ಥಿಕ ವರ್ಷದಲ್ಲಿ 13ನೇ ಹಣಕಾಸು ಆಯೋಗದ ಯೋಜನೆಯ ಅನುದಾನದಡಿ ರಸ್ತೆ ಮತ್ತು ಸೇತುವೆ ನಿರ್ವಹಣೆಗೆ ಬಿಡುಗಡೆಯಾದ ಅನುದಾನಕ್ಕೆ ಜಿಲ್ಲಾ ಪಂಚಾಯತಿಗಳು ಹಣ ಬಳಕೆ ಪ್ರಮಾಣ ಪತ್ರ ಹಾಗೂ ವೆಚ್ಚದ ವಿವರವನ್ನು ಸರ್ಕಾರಕ್ಕೆ ಸಲ್ಲಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ:34:ಆರ್‌ಆರ್‌ಸಿ:2014(ಭಾ-1), ದಿ:4-12-2014.
2. ಅನುದಾನ ಬಿಡುಗಡೆ ಆದೇಶ ಸಂಖ್ಯೆ:ಗ್ರಾಅಪ:34/1:ಆರ್‌ಆರ್‌ಸಿ:2014, ದಿ:19-1-2015.

2014-15ನೇ ಸಾಲಿನ 13ನೇ ಆರ್ಥಿಕ ಹಣಕಾಸು ಆಯೋಗದ ಅನುದಾನದಡಿ ರಸ್ತೆ ಮತ್ತು ಸೇತುವೆ ನಿರ್ವಹಣಾ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿಗಳಿಂದ ಅನುಷ್ಠಾನಗೊಳಿಸಲು ನಿಮ್ಮ ಜಿಲ್ಲೆಯ ಕ್ರಿಯಾ ಯೋಜನೆಗೆ ಉಲ್ಲೇಖ-1ರ ಸುತ್ತೋಲೆಯಲ್ಲಿ ಅನುಮೋದನೆ ನೀಡಿ, ಉಲ್ಲೇಖ-2ರ ಆದೇಶದಲ್ಲಿ ಪೂರ್ಣ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಸದರಿ ಬಿಡುಗಡೆ ಆದೇಶದ ಷರತ್ತು-7ರಲ್ಲಿ ಈ ಯೋಜನೆಯ ಪೂರ್ಣ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರ ಹಾಗೂ ವೆಚ್ಚದ ವಿವರಗಳನ್ನು ದಿನಾಂಕ:15-4-2015ರೊಳಗೆ ಯಾವುದೇ ನೆನಪೋಲೆಗೆ ಅವಕಾಶ ನೀಡದಂತೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದೆಂದು ಸೂಚಿಸಲಾಗಿರುತ್ತದೆ.

ಈವರೆಗೆ ಜಿಲ್ಲಾ ಪಂಚಾಯತಿಯಿಂದ ಸದರಿ ಯೋಜನೆಯ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿರುವುದಿಲ್ಲ. 13ನೇ ಹಣಕಾಸು ಆಯೋಗದ ಯೋಜನೆಯಡಿ ಇಲಾಖೆಗೆ ಬಿಡುಗಡೆಯಾದ ಒಟ್ಟಾರೆ ಅನುದಾನಕ್ಕೆ ಕ್ರೋಢೀಕೃತ ಹಣ ಬಳಕೆ ಪ್ರಮಾಣ ಪತ್ರವನ್ನು ಆರ್ಥಿಕ ಇಲಾಖೆಯ ಆಯೋಗ ಕೋಶಕ್ಕೆ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

ಆದುದರಿಂದ ಈ ವಿಷಯವನ್ನು ಅತಿ ಪ್ರಾಮುಖ್ಯವೆಂದು ಪರಿಗಣಿಸಿ, 2014-15ನೇ ಸಾಲಿನ ಆರ್ಥಿಕ ವರ್ಷದಲ್ಲಿ 13ನೇ ಹಣಕಾಸು ಆಯೋಗದ ಯೋಜನೆಯ ಅನುದಾನದಡಿ ರಸ್ತೆ ಮತ್ತು ಸೇತುವೆ ನಿರ್ವಹಣೆಗೆ ನಿಮ್ಮ ಜಿಲ್ಲಾ ಪಂಚಾಯತಿಗೆ ಬಿಡುಗಡೆಯಾದ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರ ಹಾಗೂ ವೆಚ್ಚದ ವಿವರಗಳನ್ನು ದಿನಾಂಕ:22-4-2015 ರಂದು ನಡೆಯುವ CAO/CPO ಗಳ ಸಭೆಗೆ ತಪ್ಪದೆ ಉಪಯುಕ್ತತಾ ಪತ್ರಗಳನ್ನು ತೆಗೆದುಕೊಂಡು ಬರುವಂತೆ ಸೂಚಿಸಿದೆ.

(ಬೂವನಹಳ್ಳಿನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:
1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.

Circular-15

2. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಚೇರಿಗಳ ಅಧೀಕ್ಷಕ ಅಭಿಯಂತರರುಗಳಿಗೆ.
3. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳಿಗೆ.